ಬ್ರಹ್ಮಾವರ ಮುಖ್ಯ ರಸ್ತೆಯ ಡಾಂಬರೀಕರಣ ಕುರಿತು

1010-ಶ್ರೀ ಪಿ. ಬಸವರಾಜ್ (ಬ್ರಹ್ಮಾವರ್) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಉಡುಪಿ ತಾಲ್ಲೂಕು ಹೆಬ್ರಿ-ಸಂತೆಕಟ್ಟೆ-ಪೇತ್ರಿ-ಬ್ರಹ್ಮಾವರ ಮುಖ್ಯ ರಸ್ತೆಯು ತುಂಬಾ ಹೊಂಡಗಳಿಂದ ಕೂಡಿದ್ದು, ಡಾಂಬರೀಕರಣ ಬಹು ವರ್ಷಗಳಿಂದ ನಡೆಯದೆ ಇರುವುದು ಸರ್ಕಾದದವರ ಗಮನಕ್ಕೆ ಬಂದಿದೆಯೇ?

ಆ) ಆ ರಸ್ತೆಯ ಡಾಂಬರೀಕರಣ ಕುರಿತಂತೆ ಸಾರ್ವಜನಿಕರು ಮನವಿಗಳನ್ನು ಸಲ್ಲಿಸಿರುವರೇ?

ಇ) ಹಾಗಿದ್ದಲ್ಲಿ ಯಾವಾಗ ಆ ರಸ್ತೆಯ ಸಂಪೂರ್ಣ ಡಾಂಬರೀಕರಣ ಮಾಡಲು ಕ್ರಮ ಕೈಗೊಳ್ಳಲಾಗುವುದು?

ಶ್ರಿ ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು):

ಅ) ಈ ರಸ್ತೆಯಲ್ಲಿ ಅಲ್ಲಲ್ಲಿ ಹೊಂಡಗಳಾಗಿದ್ದು 1.20 ಲಕ್ಷ ರೂ. ಒಟ್ಟು ಅಂದಾಜಿನಲ್ಲಿ ದುರಸ್ತಿಪಡಿಸಲಾಗುತ್ತಿದೆ.

ಆ) ಮನವಿ ಸಲ್ಲಿಸಿದ್ದಾರೆ.

ಇ) ಈ ರಸ್ತೆಯ ಅತ್ಯಂತ ಕೆಟ್ಟು ಹೋದ ಭಾಗಗಳ ಮರು ಡಾಂಬರೀಕರಣವನ್ನು 1.55 ಲಕ್ಷ ರೂ. ಗಳ ವೆಚ್ಚದಲ್ಲಿ ತೆಗೆದುಕೊಳ್ಳಲಾಗಿದೆ. ಈ ರಸ್ತೆಯ ಪೂರ್ಣ ಉದ್ದಕ್ಕೆ (29.60 ಕಿ.ಮೀ) ಮರು ಡಾಂಬರೀಕರಣವನ್ನು ಹಂತ ಹಂತವಾಗಿ ಅನುದಾನದ ಲಭ್ಯತೆಯನ್ನು ಸರಿಸಿ ತೆಗೆದುಕೊಳ್ಳಲಾಗುವುದು.

ಭೀಮಾ ನದಿಯಿಂದ ಚಡಚಾನ್ ಗ್ರಾಮಕ್ಕೆ ಕುಡಿಯುವ ನೀರಿನ ಸರಬರಾಜು.

1015-ಶ್ರೀ ಮನೋಹರ್-ಉ-ಐನಾಪುರ (ಬಳ್ಳೋಳಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಭೀಮಾ ನದಿಯಿಂದ ಚಡಚಾನ್ ಗ್ರಾಮಕ್ಕೆ ಕುಡಿಯುವ ನೀರನ್ನು ಒದಗಿಸುವ ಯೋಜನೆಯು ಅನುಮೋದಿಸಲ್ಪಟ್ಟಿದೆಯೇ?

ಆ) ಹಾಗಿದ್ದಲ್ಲಿ, ಯಾವಾಗ ಅನುಮೋದಿಸಲ್ಪಟ್ಟಿದೆ? ಯಾವಾಗ ಪೂರ್ಣಗೊಳಿಸಲಾಗುವುದು ಮತ್ತು ಈ ಯೋಜನೆಗೆ ಎಷ್ಟು ಹಣವನ್ನು ಮೀಸಲಿಡಲಾಗಿದೆ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವರು):

ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

ಜಿಲ್ಲಾ ಪರಿಷತ್, ಮಂಡಲ ಪಂಚಾಯಿತಿ ಚುನಾವಣೆ.

1019 - ಶ್ರೀ ಮನೋಹರ ಐನಾಪುರ್ (ಬಳ್ಳೋಳಿ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಜಿಲ್ಲಾ ಪರಿಷತ್ ಮತ್ತು ಮಂಡಲ ಪಂಚಾಯಿತಿ ಸಂಸ್ಥೆಗಳು ಕೆಲಸವನ್ನೇ ಮಾಡುತ್ತಿಲ್ಲ ಎಂಬುದು ಸರ್ಕಾರಕ್ಕೆ ಗೊತ್ತಿದೆಯೇ?

ಆ) ಹಾಗಿದ್ದಲ್ಲಿ, ಚುನಾವಣೆ ನಡೆಸುವವರೆಗೆ ಜಿಲ್ಲಾ ಪರಿಷತ್ ಮತ್ತು ಮಂಡಲ ಪಂಚಾಯತ್‌ಗಳಿಗೆ ಸಲಹಾ ಮಂಡಳಿಯನ್ನು ನಾಮನಿರ್ದೇಶನ ಮಾಡಲು ಸರ್ಕಾರ ಯೋಜಿಸುತ್ತಿದೆಯೇ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ಯ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇಂಡಿ ತಾಲ್ಲೂಕಿಗೆ ಕುಡಿಯುವ ನೀರಿನ ಯೋಜನೆ

1020 - ಶ್ರೀ ಮನೋಹರ ಐನಾಪುರ (ಬಳ್ಳೊಳ್ಳಿ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಡಚ್ ನೆರವಿನಡಿ ಕುಡಿಯುವ ನೀರಿನ ಹಾಗೂ ನೈರ್ಮಲ್ಯೀಕರಣ ಯೋಜನೆಯಡಿಯಲ್ಲಿ ಇಂಡಿ ತಾಲ್ಲೂಕಿನಲ್ಲಿನ ಎಷ್ಟು ಹಳ್ಳಿಗಳನ್ನು ಸೇರಿಸಲಾಗಿದೆ?

ಆ) ಈ ಯೋಜನೆಯಡಿ ಸರ್ಕಾರವು ಇನ್ನೂ ಕೆಲವು ಹಳ್ಳಿಗಳನ್ನು ಸೇರಿಸಲು ಉದ್ದೇಶಿಸಿದೆಯೇ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) 6 ಹಳ್ಳಿಗಳು

ಆ) ಇಲ್ಲ.

Release of amount to the Zilla Parishads towards construction of roads and bridges.

1027 - Sri. Manohar Ainapur (Ballolli): Wiil the Minister for Public Works be pleased to state?

a) *Whether the Government had sanctioned Rs. 40 lakhs to each constituency for the construction of roads and bridges for having taken up new roads from Zilla Parishad?*

b) *Whether the money has been released, if so, the total progress of the department in that aspect,*

Sri. K.H. Ranganath (Minister for public works):

a) No.

b) No.

ಜಿಲ್ಲಾಪರಿಷತ್ ಮತ್ತು ಮಂಡಲಪಂಚಾಯಿತಿ ಚುನಾವಣೆ

1016 - ಶ್ರೀ ಮನೋಹರ ಐನಾಪುರ (ಬಳ್ಳೊಳ್ಳಿ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?